# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 728
ಸದಸ್ಯರ ಹೆಸರು : ಶ್ರೀಮತಿ ಹೇಮಲತಾ ನಾಯಕ್
(ವಿಧಾನಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ : 18.08.2025.
ಉತ್ತರಿಸುವ ಸಚಿವರು : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು.

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕೊಪ್ಪಳ ಜಿಲ್ಲೆಯಲ್ಲಿ ನೂತನವಾಗಿ ರಚನೆಯಾಗಿರುವ ಎಷ್ಟು ತಾಲ್ಲೂಕಿನಲ್ಲಿ ಎಲ್ಲಾ ಇಲಾಖೆಗಳ ತಾಲ್ಲೂಕು ಮಟ್ಟದ ಕಚೇರಿಗಳು ಪ್ರಾರಂಭ ಮಾಡಲಾಗಿದೆ; (ಮಾಹಿತಿಯನ್ನು ಒದಗಿಸುವುದು) | ಕೊಪ್ಪಳ ಜಿಲ್ಲೆಯಲ್ಲಿ ನೂತನವಾಗಿ 03 ಹೊಸ ಕಂದಾಯ ತಾಲ್ಲೂಕುಗಳು ರಚನೆಯಾಗಿರುತ್ತವೆ.<br><br>ಹೊಸದಾಗಿ ರಚನೆಯಾಗಿರುವ ತಾಲ್ಲೂಕುಗಳಲ್ಲಿ ಶಾಲಾ ಶಿಕ್ಷಣ ಇಲಾಖೆಯಿಂದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿಯನ್ನು ಪ್ರಾರಂಭಿಸುವ ಕುರಿತು ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ ಇವರು ಸಲ್ಲಿಸಿರುವ ಪ್ರಸ್ತಾವನೆಯಲ್ಲಿ ಕೆಲವು ಹುದ್ದೆಗಳನ್ನು ಮರುವಿನ್ಯಾಸಗೊಳಿಸುವುದರ ಜೊತೆಗೆ ಸುಮಾರು 1200ಕ್ಕೂ ಹೆಚ್ಚು ಹುದ್ದೆಗಳನ್ನು ಹೊಸದಾಗಿ ಸೃಜಿಸಲು ಹಾಗೂ ಸ್ವಂತ ಕಟ್ಟಡ ಲಭ್ಯವಿಲ್ಲದೇ ಇರುವ ಸ್ಥಳಗಳಲ್ಲಿ ಬಾಡಿಗೆ ಕಟ್ಟಡಗಳನ್ನು ಪಡೆಯಲು, ಹೊಸ ಕಚೇರಿಗಳಲ್ಲಿ ಅಧಿಕಾರಿ / ಸಿಬ್ಬಂದಿಗಳ ವೇತನ ಭರಿಸಲು, ಅಗತ್ಯ ಮೂಲಭೂತ ಸೌಕರ್ಯ ಒದಗಿಸಲು ಹಾಗೂ ಕಚೇರಿ ನಿರ್ವಹಣೆಗಾಗಿ ಸುಮಾರು ರೂ.1069.24 ಲಕ್ಷಗಳು ಅಗತ್ಯವಿರುವುದಾಗಿ ಪ್ರಸ್ತಾಪಿಸಲಾಗಿರುತ್ತದೆ. ಅದರಂತೆ, ಈ ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆಯ ಸಹಮತಿಗಾಗಿ ಸಲ್ಲಿಸಲಾಗಿತ್ತು.<br><br>ಹೊಸದಾಗಿ ರಚನೆಯಾದ ಕಂದಾಯ ತಾಲ್ಲೂಕುಗಳಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿಯನ್ನು ಪ್ರಾರಂಭಿಸುವ ಪ್ರಸ್ತಾವನೆಯನ್ನು 2 ವರ್ಷಗಳ ಕಾಲ ಮುಂದೂಡುವಂತೆ ಆರ್ಥಿಕ ಇಲಾಖೆಯು ದಿನಾಂಕ: 27.05.2025 ರಂದು ಅಭಿಪ್ರಾಯ ನೀಡಿ ಪ್ರಸ್ತಾವನೆಯನ್ನು ಹಿಂದಿರುಗಿಸಿರುತ್ತದೆ.<br><br>ಹೊಸದಾಗಿ ರಚನೆಯಾದ ಕಂದಾಯ ತಾಲ್ಲೂಕುಗಳಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ಕಛೇರಿಗಳ ಪ್ರಾರಂಭಿಸುವ ಪ್ರಸ್ತಾವನೆಗಳು ಸ್ವೀಕೃತವಾಗುತ್ತಿರುವ ಹಿನ್ನೆಲೆಯಲ್ಲಿ, ಮತ್ತೊಮ್ಮೆ ಆರ್ಥಿಕ ಇಲಾಖೆಯ ಸಹಮತಿಯನ್ನು ಕೋರಲಾಗಿದೆ. |
| ಆ) | ಕೊಪ್ಪಳ ಜಿಲ್ಲೆಯಲ್ಲಿ ನೂತನವಾಗಿ ರಚನೆಯಾಗಿರುವ ತಾಲ್ಲೂಕು ಕೇಂದ್ರಗಳಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿಗಳು ಪ್ರಾರಂಭಿಸಲಾಗಿದೆಯೇ; | |
| ಇ) | ಹೊಸ ತಾಲ್ಲೂಕುಗಳಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿಗಳು | ಹೌದು |

| | | |
|---|---|---|
| | ಪ್ರಾರಂಭವಾಗದೇ ಇರುವ ಕಡೆಗಳಲ್ಲಿ ಹಳೆ ತಾಲ್ಲೂಕು ಹಾಗೂ ಹೊಸ ತಾಲ್ಲೂಕು ಸೇರಿ ಒಂದೇ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ ಇರುವುದರಿಂದ ಹೆಚ್ಚಿನ ಕಾರ್ಯಭಾರವಾಗುತ್ತಿರುವುದು ಸರ್ಕಾರ ಗಮನಿಸಿದೆಯೇ; ಹೆಚ್ಚಿನ ಕಾರ್ಯಭಾರ ತಗ್ಗಿಸಲು ಸರ್ಕಾರ ಏನು ಕ್ರಮಕೈಗೊಂಡಿದೆ; (ಮಾಹಿತಿಯನ್ನು ಒದಗಿಸುವುದು) | ಪ್ರಸ್ತುತ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿಯಲ್ಲಿ ಇರುವ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಕ್ಷೇತ್ರ ಸಮನ್ವಯಾಧಿಕಾರಿಗಳು, ಶಿಕ್ಷಣ ಸಂಯೋಜಕರು (ಪ್ರಾಥಮಿಕ ಹಾಗೂ ಪ್ರೌಢ), ಕ್ಷೇತ್ರ ಸಂಪನ್ಮೂಲ ವ್ಯಕ್ತಿ (ಪ್ರಾಥಮಿಕ ಹಾಗೂ ಪ್ರೌಢ) ಮತ್ತು ಸಮೂಹ ಸಂಪನ್ಮೂಲ ವ್ಯಕ್ತಿಗಳ ಮೂಲಕ ಕಾರ್ಯನಿರ್ವಹಿಸಲಾಗುತ್ತಿದೆ. |
| ಈ) | ನೂತನ ತಾಲ್ಲೂಕಿನಲ್ಲಿ ಬಿ.ಇ.ಓ. ಕಛೇರಿಗಳು ಪ್ರಾರಂಭವಾಗದ ಕಾರಣ ಶಾಲೆಗಳ ಸಮರ್ಪಕ ವೀಕ್ಷಣೆ, ಸಾರ್ವಜನಿಕರಿಗೆ ಸೂಕ್ತ ಸ್ಪಂದನೆ, ಮಕ್ಕಳ ಶಿಕ್ಷಣ ಗುಣಮಟ್ಟ ಹಾಗೂ ಜಿಲ್ಲಾ ಮಟ್ಟದ ಶೈಕ್ಷಣಿಕ ಬೆಳವಣಿಗೆಯಲ್ಲಿ ಕುಂಠಿತವಾಗುತ್ತಿರುವುದನ್ನು ಸರ್ಕಾರ ಒಪ್ಪುವುದೇ; ಒಪ್ಪಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು; (ಮಾಹಿತಿಯನ್ನು ಒದಗಿಸುವುದು) | |
| ಉ) | ಈ ಎಲ್ಲಾ ಅಂಶಗಳು ಪರೋಕ್ಷವಾಗಿ ವಿದ್ಯಾರ್ಥಿಗಳ ಶೈಕ್ಷಣಿಕ ಗುಣಮಟ್ಟ ಕುಸಿತವಾಗಲು ಕಾರಣವಲ್ಲವೇ; ಶೈಕ್ಷಣಿಕ ಗುಣಮಟ್ಟ ಬಲಪಡಿಸಲು ಹೊಸ ತಾಲ್ಲೂಕುಗಳಲ್ಲಿ ಬಿ.ಇ.ಓ. ಕಛೇರಿಗಳನ್ನು ಪ್ರಾರಂಭಿಸುವ ಯೋಜನೆ ಸರ್ಕಾರದ ಮುಂದಿದೆಯೇ; ಇದ್ದಲ್ಲಿ ಯಾವ ವರ್ಷದಲ್ಲಿ ಪ್ರಾರಂಭಿಸಲಾಗುವುದು? (ವಿವರವಾದ ಮಾಹಿತಿಯನ್ನು ಒದಗಿಸುವುದು) | ಹೊಸದಾಗಿ ರಚನೆಯಾದ ಕಂದಾಯ ತಾಲ್ಲೂಕುಗಳಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿಯನ್ನು ಪ್ರಾರಂಭಿಸುವ ಪ್ರಸ್ತಾವನೆಯನ್ನು 2 ವರ್ಷಗಳ ಕಾಲ ಮುಂದೂಡುವಂತೆ ಆರ್ಥಿಕ ಇಲಾಖೆಯು ದಿನಾಂಕ: 27.05.2025 ರಂದು ಅಭಿಪ್ರಾಯ ನೀಡಿರುತ್ತದೆ. ಆದಾಗ್ಯೂ, ಹೊಸದಾಗಿ ರಚನೆಯಾದ ಕಂದಾಯ ತಾಲ್ಲೂಕುಗಳಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ಕಛೇರಿಗಳ ಪ್ರಾರಂಭಿಸುವ ಪ್ರಸ್ತಾವನೆಗಳು ಸ್ವೀಕೃತವಾಗುತ್ತಿರುವ ಹಿನ್ನೆಲೆಯಲ್ಲಿ, ಮತ್ತೊಮ್ಮೆ ಆರ್ಥಿಕ ಇಲಾಖೆಯ ಸಹಮತಿಯನ್ನು ಕೋರಲಾಗಿದೆ. |

ಇಪಿ 145 ಡಿಎಆರ್ 2025

(ಎಸ್. ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು